**ಪಿ. ಡಬ್ಲೂ -1**

**<u>ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು, ದಿನಾಂಕ. 15-11-2024</u>**

**ಅರ್ಜಿಯ ಮೇಲಿನ ಆದೇಶದಂತೆ ಮುಂದುವರೆದ ಪಾಟೀ ಸವಾಲುಃ ಶ್ರೀ ಆರ್ ಸಿ ಎಸ್ ಆರೋಪಿ ಪರ ವಕೀಲರಿಂದಃ**

ದಿ. 11-12-2019 ರಂದು ಕೋವಿಡ್ -19 ಸಾಂಕ್ರಾಮಿಕ ಕಾಯಿಲೆ ಇತ್ತು ಎಂದರೆ ಸರಿಯಲ್ಲ. ದಿ. 11-12-2019 ರಂದು ಕೋವಿಡ್ -19 ಸಾಂಕ್ರಾಮಿಕ ಕಾಯಿಲೆ ಇದ್ದುದರಿಂದ ನನ್ನ ಮಗ ಕೆಲಸಕ್ಕೆ ಹೋಗುತ್ತಿರಲಿಲ್ಲ ಎಂದರೆ ಸರಿಯಲ್ಲ. ಆರೋಪಿಯೊಂದಿಗೆ ಈ ಪ್ರಕರಣದ ವ್ಯವಹಾರವನ್ನು ಹೊರತುಪಡಿಸಿ ಬೇರೆ ಯಾವುದೇ ವ್ಯವಹಾರ ಇರುವುದಿಲ್ಲ. ಆರೋಪಿಯ ಕುಟುಂಬದ ವಿಚಾರದ ಬಗ್ಗೆ ನನಗೆ ಗೊತ್ತಿಲ್ಲ. ನಾನು ಆರೋಪಿಗೆ ಹಣ ನೀಡುವಾಗ ಭದ್ರತೆಗಾಗಿ ಯಾವುದೇ ದಾಖಲೆಯನ್ನು ಪಡೆದುಕೊಂಡು ಹಣ ನೀಡಬಹುದಾಗಿತ್ತು ಎಂದರೆ ಸಾಕ್ಷಿಯು ನಾನು ನಂಬಿಕೆಯ ಮೇಲೆ ಹಣ ನೀಡಿರುತ್ತೇನೆ ಎಂದು ನುಡಿಯುತ್ತಾರೆ. ನಾನು ಆರೋಪಿಗೆ ನೋಟೀಸ್ ನೀಡುವ ಪೂರ್ವದಲ್ಲಿ ಅರೋಪಿ ನನಗೆ ನೋಟೀಸ್ ನೀಡಿರುತ್ತಾರೆ ಎಂದರೆ ಸರಿ. ಸದರಿ ನೋಟೀಸ್ ನಲ್ಲಿ ಆರೋಪಿಯಿಂದ ನಾನು ಹಣವನ್ನು ಸಾಲವಾಗಿ ಪಡೆದುಕೊಂಡಿರುತ್ತೇನೆ ಎಂದು ಹೇಳಿರುತ್ತದೆ ಎಂದರೆ ಸಾಕ್ಷಿಯು ಅದು ಸುಳ್ಳು ಆಗಿರುತ್ತದೆ ಎಂದು ನುಡಿಯುತ್ತಾರೆ. ನಾನೇ ಆರೋಪಿಗೆ ರೂ. 2 ಲಕ್ಷ ಸಾಲದ ಹಣವನ್ನು ಮರುಪಾವತಿ ಮಾಡಬೇಕಾಗಿರುತ್ತದೆ ಎಂದರೆ ಸುಳ್ಳು. ನಾನು ಹಾಜರುಪಡಿಸಿದ ಚೆಕ್ಕು ನಾನು ಆರೋಪಿಯಿಂದ ಸಾಲದ ರೂಪದಲ್ಲಿ ಪಡೆದುಕೊಂಡ ಹಣದ ಚೆಕ್ಕಾಗಿರುತ್ತದೆ ಎಂದರೆ ಸುಳ್ಳು. ಆರೋಪಿಯಿಂದ ಪಡೆದುಕೊಂಡ ಸಾಲದ ಹಣವನ್ನು ಮರುಪಾವತಿ ಮಾಡುವುದರಿಂದ ತಪ್ಪಿಸಿಕೊಳ್ಳಲು ಈ ಸುಳ್ಳು ಪ್ರಕರಣವನ್ನು ದಾಖಲಿಸಿರುತ್ತೇನೆ ಎಂದರೆ ಸುಳ್ಳು. ಆರೋಪಿಯು ನನಗೆ ಯಾವುದೇ ಹಣವನ್ನು ಕೊಡುವುದು ಬಾಕಿ ಇರುವುದಿಲ್ಲ ಎಂದರೆ ಸುಳ್ಳು.

ಮರುವಿಚಾರಣೆಃ ಇಲ್ಲ

(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಎ ಒಪ್ಪಲಾಗಿದೆ.

ಎರಡನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್ ಸಿ.,
ದೇವನಹಳ್ಳಿ.